# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ : ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಜಮೀನುಗಳಿಗೆ ಭೂಪರಿಹಾರದ ಬದಲಾಗಿ ಪ್ರತಿ ಎಕರೆಗೆ ಅಭಿವೃದ್ಧಿಪಡಿಸಿದ 9583 ಚದರ ಅಡಿ ವಿಸ್ತೀರ್ಣವನ್ನು 10781 ಚದರ ಅಡಿ ವಿಸ್ತೀರ್ಣಕ್ಕೆ ಹೆಚ್ಚಿಸಿರುವ ಕುರಿತು.

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ: ಸಿಐ 417 ಎಸ್‌ಪಿಕ್ಯೂ 2007, ದಿನಾಂಕ: 13.08.2007.
2. ಸರ್ಕಾರದ ಆದೇಶ ಸಂಖ್ಯೆ: ಸಿಐ 495 ಎಸ್‌ಪಿಕ್ಯೂ 2008, ದಿನಾಂಕ: 13.05.2010.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಇವರ ಪತ್ರ ಸಂಖ್ಯೆ: ಕ.ಕೈ.ಪ್ರ.ಮಂ/ ಕೇಂಕ/ ಹನಿ/ 6124/ 2019-20, ದಿನಾಂಕ: 30.07.2019.
4. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಇವರ ಪತ್ರ ಸಂಖ್ಯೆ: ಕ.ಕೈ.ಪ್ರ.ಮಂ/ ಕೇಂಕ/ ಭೂಸ್ವಾ/ 1881/ 2007/ 2846, ದಿನಾಂಕ: 22.07.2020.

– – * – –

<u>ಪ್ರಸ್ತಾವನೆ:-</u>

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕೈಗಾರಿಕಾ ಪ್ರದೇಶಕ್ಕಾಗಿ ಭೂಸ್ವಾಧೀನಪಡಿಸಿಕೊಳ್ಳುವ ಜಮೀನುಗಳ ಭೂಮಾಲೀಕರಿಗೆ ಭೂಪರಿಹಾರದ ಬದಲಾಗಿ ಪ್ರತಿ ಎಕರೆಗೆ

8,500 ಚದರ ಅಡಿ ಅಭಿವೃದ್ಧಿಪಡಿಸಿದ ಜಮೀನನ್ನು ನೀಡುವ ಯೋಜನೆಯನ್ನು ಮೇಲೆ (1)ರಲ್ಲಿ ಓದಲಾದ ಆದೇಶದನ್ವಯ ಜಾರಿಗೆ ತರಲಾಗಿದೆ.

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಸ್ವಾಧೀನಪಡಿಸುತ್ತಿರುವ ಜಮೀನಿನ ಭೂಮಾಲೀಕರಿಗೆ ಭೂಪರಿಹಾರದ ಬದಲಾಗಿ ನೀಡಲಾಗುವ ಅಭಿವೃದ್ಧಿಪಡಿಸಿದ ಜಮೀನಿನ ವಿಸ್ತೀರ್ಣವನ್ನು 8,500 ಚದರ ಅಡಿಯಿಂದ 9,583 ಚದರ ಅಡಿಗೆ ಪರಿಷ್ಕರಿಸಿ ಜಮೀನನ್ನು ನೀಡಲು ಮೇಲೆ (2)ರಲ್ಲಿ ಓದಲಾದ ಆದೇಶದಲ್ಲಿ ಆದೇಶಿಸಲಾಗಿದೆ.

ಆದಾಗ್ಯೂ, ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವಾಗ ರೈತರಿಂದ ಮತ್ತು ಭೂಮಾಲೀಕರಿಂದ ಕೆ.ಐ.ಎ.ಡಿ.ಬಿ.ಯು ಪ್ರತಿರೋಧ ಎದುರಿಸುತ್ತಿದೆ. ಅಲ್ಲದೇ, ಭೂಪರಿಹಾರದ ಬದಲಾಗಿ ಅಭಿವೃದ್ಧಿಪಡಿಸಿದ ಜಮೀನನ್ನು ಪಡೆಯಲು ಹೆಚ್ಚಿನ ಬೇಡಿಕೆ ಸಲ್ಲಿಸದಿರುವುದು ಕಂಡು ಬಂದಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 444 ಬೆಂಭೂಸ್ವಾ 2017, ದಿನಾಂಕ 11.01.2018ರಲ್ಲಿ ಕೆಂಪೇಗೌಡ ಬಡಾವಣೆಯಲ್ಲಿ ಹಾದುಹೋಗುವ ಪೆರಿಫೆರಲ್ ರಿಂಗ್ ರೋಡ್.ಗೆ ಸ್ವಾಧೀನಪಡಿಸಿರುವ ಜಮೀನಿನ ಭೂಮಾಲೀಕರಿಗೆ ಶೇಕಡಾ 50:50ರ ಅನುಪಾತದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಅಭಿವೃದ್ಧಿಪಡಿಸಿದ ನಿವೇಶನಗಳನ್ನು ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ಭೂಪರಿಹಾರದ ರೂಪದಲ್ಲಿ ಭೂಮಾಲೀಕರಿಗೆ ನೀಡಲು ಮಂಜೂರಾತಿ ನೀಡಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ವಇ 27 ಕಗೃಮಂ 2020, ದಿನಾಂಕ: 07.09.2020ರಲ್ಲಿ ಸೂರ್ಯನಗರ 4ನೇ ಹಂತದ ವಸತಿ ಯೋಜನೆಗಾಗಿ ಭೂಸ್ವಾಧೀನಕ್ಕೆ ಒಳಪಡಿಸಿರುವ 1938 ಎಕರೆ ಜಮೀನುಗಳನ್ನು ಶೇಕಡಾ 50:50ರ ಅನುಪಾತದಲ್ಲಿ ಪಾಲುದಾರಿಕೆ ಒಪ್ಪಂದದಂತೆ ಭೂಸ್ವಾಧೀನಪಡಿಸಿಕೊಳ್ಳಲು ಅನುಮೋದಿಸಲಾಗಿದೆ.

ಕೆ.ಐ.ಎ.ಡಿ.ಬಿ.ಯು ರಾಜ್ಯದಲ್ಲಿ ಕೈಗಾರಿಕಾಭಿವೃದ್ಧಿಗೆ ಹೆಚ್ಚಿನ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಗೊಳ್ಳುತ್ತಿದ್ದು, ಭೂಮಾಲೀಕರಿಗೆ ಭೂಪರಿಹಾರ ನೀಡಲು ಹೆಚ್ಚಿನ ಅನುದಾನ ಬೇಕಾಗಿರುವುದರಿಂದ ಹಾಗೂ ಕೆ.ಐ.ಎ.ಡಿ.ಬಿ.ಯ ಆರ್ಥಿಕ ಮೂಲವು ಬಲವಾಗಿ ಇಲ್ಲವಾದ ಕಾರಣ, ಭೂಮಾಲೀಕರ

ಪ್ರತಿರೋಧವನ್ನು ಶಮನಗೊಳಿಸಲು ಕೆ.ಐ.ಎ.ಡಿ.ಬಿ.ಯಿಂದ ಭೂಸ್ವಾಧೀನಪಡಿಸಿಕೊಳ್ಳುವ ಜಮೀನಿಗೆ ಭೂಪರಿಹಾರದ ಬದಲಾಗಿ ಪ್ರತಿ ಎಕರೆ ಜಮೀನಿಗೆ ಪ್ರಸ್ತುತ ನೀಡುತ್ತಿರುವ ಅಭಿವೃದ್ಧಿಪಡಿಸಿರುವ 9,583 ಚದರ ಅಡಿಯಿಂದ 10,781 ಚದರ ಅಡಿ ವಿಸ್ತೀರ್ಣಕ್ಕೆ ಹೆಚ್ಚಿಸುವ ಕುರಿತು ಸರ್ಕಾರದ ಅನುಮೋದನೆ ಪಡೆಯಲು ದಿನಾಂಕ: 12.07.2019 ರಂದು ನಡೆದ ಕೆ.ಐ.ಎ.ಡಿ.ಬಿ.ಯ 362ನೇ ಮಂಡಳ ಸಭೆಯಲ್ಲಿ ಅನುಮೋದನೆಯಾಗಿರುತ್ತದೆ.

ಅದರಂತೆ, ಕೆ.ಐ.ಎ.ಡಿ.ಬಿ.ಯಿಂದ ಭೂಸ್ವಾಧೀನಪಡಿಸಿಕೊಳ್ಳುವ ಜಮೀನಿನ ಭೂಮಾಲೀಕರಿಗೆ ಜಮೀನಿನ ಪರಿಹಾರದ ಬದಲಾಗಿ ಪ್ರತಿ ಎಕರೆಗೆ ಪ್ರಸ್ತುತ ನೀಡುತ್ತಿರುವ ಅಭಿವೃದ್ಧಿಪಡಿಸಿರುವ ನಿವೇಶನ 9583 ಚದರ ಅಡಿಯಿಂದ 10781 ಚದರ ಅಡಿಗೆ ಹೆಚ್ಚಿಸುವ ಪ್ರಸ್ತಾವನೆಗೆ ಅನುಮೋದನೆ ನೀಡುವಂತೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಬೆಂಗಳೂರು ಇವರು ಮೇಲೆ (3) ಮತ್ತು (4)ರಲ್ಲಿ ಓದಲಾದ ಪ್ರಸ್ತಾವನೆಗಳಲ್ಲಿ ಕೋರಿದ್ದಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರ, ಕೆ.ಐ.ಎ.ಡಿ.ಬಿ.ಯಿಂದ ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಜಮೀನುಗಳಿಗೆ ಭೂಪರಿಹಾರದ ಬದಲಾಗಿ ನೀಡುತ್ತಿರುವ ಅಭಿವೃದ್ಧಿಪಡಿಸಿದ ಜಮೀನಿನ ವಿಸ್ತೀರ್ಣವನ್ನು ಪರಿಷ್ಕರಿಸಲು ನಿರ್ಣಯಿಸಿರುತ್ತದೆ. ಆದುದರಿಂದ ಓದಲಾದ (1) ಮತ್ತು (2)ರ ಸರ್ಕಾರದ ಆದೇಶಗಳನ್ನು ಪರಿಷ್ಕರಿಸಿ, ಈ ಕೆಳಕಂಡಂತೆ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 103 ಎಸ್‌ಪಿಕ್ಯೂ (ಇ) 2019,**

**ಬೆಂಗಳೂರು ದಿನಾಂಕ: 23.02.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳ (ಕೆ.ಐ.ಎ.ಡಿ.ಬಿ.) ಯಿಂದ ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಕೈಗಾರಿಕಾ ಪ್ರದೇಶದ ಜಮೀನುಗಳಿಗೆ ಭೂಪರಿಹಾರದ ಬದಲಾಗಿ ಪ್ರತಿ ಎಕರೆ ಜಮೀನಿಗೆ ನೀಡುತ್ತಿರುವ ಅಭಿವೃದ್ಧಿಪಡಿಸಿದ ಜಮೀನಿನ ವಿಸ್ತೀರ್ಣವನ್ನು ಪ್ರಸ್ತುತ ಇರುವ 9583 ಚದರ ಅಡಿಯಿಂದ 10781 ಚದರ ಅಡಿ ವಿಸ್ತೀರ್ಣಕ್ಕೆ ಹೆಚ್ಚಿಸಿ, ಈ ಕೆಳಕಂಡ ನಿಬಂಧನೆಗಳಗೊಳಪಟ್ಟು ಅಭಿವೃದ್ಧಿಪಡಿಸಿದ

ಜಮೀನನ್ನು ನೀಡಲು ಆದೇಶಿಸಲಾಗಿದೆ.

1) ಅಭಿವೃದ್ಧಿಪಡಿಸಿದ ಜಮೀನನ್ನು ಪಡೆಯಲು ಇಚ್ಛಿಸದ ಭೂಮಾಲೀಕರಿಗೆ ಈಗಾಗಲೇ ಜಾರಿಯಲ್ಲಿರುವಂತೆ ಭೂಪರಿಹಾರವನ್ನು ಹಣದ ರೂಪದಲ್ಲಿ ನೀಡತಕ್ಕದ್ದು.

2) ಈ ಯೋಜನೆಯು ಕೆ.ಐ.ಎ.ಡಿ.ಬಿ.ಯು ಸ್ವಾಧೀನಪಡಿಸಿಕೊಳ್ಳುತ್ತಿರುವ ಕೈಗಾರಿಕಾ ಪ್ರದೇಶಗಳ ಪ್ರಕರಣಗಳಿಗೆ ಅನ್ವಯಿಸುತ್ತದೆ.

3) ಸದರಿ ಪಾಲುದಾರಿಕೆ ಯೋಜನೆಯು ನಗದು ಪರಿಹಾರ ಬದಲಿಗೆ ಅದೇ ಕೈಗಾರಿಕಾ ಪ್ರದೇಶದಲ್ಲಿ ಸ್ವಾಧೀನಪಡಿಸಿಕೊಂಡ ಅಭಿವೃದ್ಧಿಪಡಿಸಿದ ಜಮೀನನ್ನು ಮಾತ್ರ ಭೂಮಾಲೀಕರಿಗೆ ನೀಡಲು ಅವಕಾಶ ಕಲ್ಪಿಸಲಾಗಿದೆ.

4) ಚಾಲ್ತಿಯಲ್ಲಿರುವ ಕೈಗಾರಿಕಾ ಪ್ರದೇಶಗಳಲ್ಲಿ ಭೂಮಾಲೀಕರು ಇನ್ನೂ ಭೂಪರಿಹಾರವನ್ನು ಪಡೆಯದ ಪ್ರಕರಣಗಳಿಗೆ, ಅವರುಗಳು ಇಚ್ಛಿಸಿದಲ್ಲಿ, ಅದೇ ಕೈಗಾರಿಕಾ ಪ್ರದೇಶಗಳಲ್ಲಿ ಅಭಿವೃದ್ಧಿಪಡಿಸಿದ ಜಮೀನು ಲಭ್ಯವಿದ್ದಲ್ಲಿ ಮಾತ್ರ ಈ ಯೋಜನೆಯನ್ನು ವಿಸ್ತರಿಸಲು ಹಾಗೂ ಅಭಿವೃದ್ಧಿಪಡಿಸಿದ ಜಮೀನು ಲಭ್ಯವಿಲ್ಲದ ಪಕ್ಷದಲ್ಲಿ ನಗದು ರೂಪದಲ್ಲಿಯೇ ಭೂಪರಿಹಾರವನ್ನು ಪಡೆಯತಕ್ಕದ್ದು.

5) ಅಭಿವೃದ್ಧಿಗೊಳಿಸಿದ ಜಮೀನನ್ನು ಭೂಮಾಲೀಕರಿಗೆ ಶುದ್ಧ ಕ್ರಯಪತ್ರದ (Sale Deed) ಮೂಲಕ ನೀಡತಕ್ಕದ್ದು ಹಾಗೂ ಅದನ್ನು ವಸತಿ / ವಾಣಿಜ್ಯ / ಕೈಗಾರಿಕೆ ಉದ್ದೇಶಗಳಿಗಾಗಿ ಸ್ವತಃ ಬಳಸಿಕೊಳ್ಳಲು ಅಥವಾ ಸದರಿ ಜಮೀನಿನ ಮೇಲೆ ಮಾಲೀಕತ್ವದ ಪೂರ್ತಿ ಹಕ್ಕನ್ನು ಚಲಾಯಿಸಬಹುದಾಗಿದೆ.

6) ಯಾವುದೇ ನಿರ್ಮಾಣ ಕಾರ್ಯ ಪ್ರಾರಂಭಿಸುವ ಮೊದಲು ಭೂಮಾಲೀಕರು ಕೆ.ಐ.ಎ.ಡಿ.ಬಿ.ಯಿಂದ ಕಟ್ಟಡ ನಕ್ಷೆಯನ್ನು ಮಂಜೂರು ಮಾಡಿಸಿಕೊಳ್ಳತಕ್ಕದ್ದು.

7) ಈ ಯೋಜನೆಯು ಏಕಘಟಕ ಸಂಕೀರ್ಣ (SUC) ಕೈಗಾರಿಕಾ ಘಟಕಕ್ಕಾಗಿ ಹಾಗೂ ಮೂಲಸೌಲಭ್ಯ ಯೋಜನೆಗಳಗಾಗಿ (Infrastructural Projects) ಭೂಸ್ವಾಧೀನಪಡಿಸಿಕೊಳ್ಳುವ ಪ್ರಕರಣಗಳಗೆ ಅನ್ವಯಿಸುವುದಿಲ್ಲ.

ಈ ಆದೇಶವನ್ನು ಸಚಿವ ಸಂಪುಟ ಟಿಪ್ಪಣಿ ಸಂಖ್ಯೆ: ಸಿ: 43/2021, ದಿನಾಂಕ 18.02.2021ರಲ್ಲಿ ನೀಡಿರುವ ಅನುಮೋದನೆ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ

ಎನ್. ಕುಮಾರ್ 23/2/2021.

(ಎನ್. ಕುಮಾರ್)

ಸರ್ಕಾರದ ಅಧೀನ ಕಾರ್ಯದರ್ಶಿ (ಕೈ.ಅ)

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.

<u>ಪ್ರತಿ:</u>

1) ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು
2) ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು
3) ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳ, ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು.
4) ಮುಖ್ಯ ಅಭಿಯಂತರ–1, ಕೆ.ಐ.ಎ.ಡಿ.ಬಿ., ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು.

5) ಮುಖ್ಯ ಅಭಿಯಂತರ–2, ಕೆ.ಐ.ಎ.ಡಿ.ಬಿ., ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು

6) ವಿಶೇಷ ಜಿಲ್ಲಾಧಿಕಾರಿ, ಕೆ.ಐ.ಎ.ಡಿ.ಬಿ., ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು

7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉದ್ಯೋಗ ಮಿತ್ರ, ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು

8) ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು

(ಉಲ್ಲೇಖ: ಸಚಿವ ಸಂಪುಟ ಪ್ರಕರಣ ಸಂಖ್ಯೆ: ಸಿ 43/2021I.)

9) ಕಾರ್ಯದರ್ಶಿ–1 / 2 / 3, ಕೆ.ಐ.ಎ.ಡಿ.ಬಿ., ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು

10) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಎಲ್ಲಾ ವಿಶೇಷ ಭೂಸ್ವಾಧೀನಾಧಿಕಾರಿಗಳು,

11) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಎಲ್ಲಾ ಕಾರ್ಯಪಾಲಕ ಅಭಿಯಂತರರು,

12) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

13) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.

14) ನಿರ್ದೇಶಕರು (ತಾಂತ್ರಿಕ ಕೋಶ) ರವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.

15) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.